Akashvani : Bangalore
National Bulletins In Kannada
24.10.2025 / 19.35 pm
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ರಾಷ್ಟ್ರೀಯ ರೋಜ್‌ಗಾರ್ ಮೇಳ; ೫೧ ಸಾವಿರಕ್ಕೂ ಹೆಚ್ಚು ಯುವಕರಿಗೆ ನೇಮಕ ಪತ್ರ ವಿತರಿಸಿದ ಪ್ರಧಾನಿ ನರೇಂದ್ರ ಮೋದಿ
- ವಿಕಸಿತ ಭಾರತದ ದೃಷ್ಟಿಕೋನ ಸಾಧಿಸಲು ಮಹಿಳೆಯರ ಸಕ್ರಿಯ ಭಾಗವಹಿಸುವಿಕೆ ಅಗತ್ಯ - ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದನೆ
- ಬಿಹಾರ ವಿಧಾನಸಭೆ ಚುನಾವಣೆ; ಎನ್‌ಡಿಎ, ಮಹಾಘಟಬಂಧನ ನಾಯಕರಿಂದ ಬಿರುಸುಗೊಂಡ ಪ್ರಚಾರ
- ಬರ್ಲಿನ್ ಜಾಗತಿಕ ಸಂವಾದದಲ್ಲಿ ಕೇಂದ್ರ ಸಚಿವ ಪಿಯೂಷ್ ಗೋಯಲ್ ಭಾಗಿ ; ಭಾರತದಲ್ಲಿ ಹೂಡಿಕೆ ಮಾಡುವಂತೆ ಜಾಗತಿಕ ಕಂಪನಿಗಳಿಗೆ ಆಹ್ವಾನ

******************

ದೇಶದ ಯುವಕರ ಕನಸುಗಳನ್ನು ನನಸಾಗಿಸುವ ಮಾಧ್ಯಮವಾಗಿ ಉದ್ಯೋಗ ಮೇಳಗಳು ಮಾರ್ಪಟ್ಟಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ೧೭ನೇ ರಾಷ್ಟ್ರೀಯ ರೋಜ್‌ಗಾರ್ ಮೇಳದಲ್ಲಿ ವಿಡಿಯೋ ಸಂದೇಶದಲ್ಲಿ ಪ್ರಧಾನಿ, ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ಹೊಸದಾಗಿ ನೇಮಕಗೊಂಡ ೫೧ ಸಾವಿರಕ್ಕೂ ಹೆಚ್ಚು ಯುವಕರಿಗೆ ರೋಜ್‌ಗಾರ್ ಮೇಳದಡಿಯಲ್ಲಿ ನೇಮಕಾತಿ ಪತ್ರಗಳನ್ನು ವಿತರಿಸಲಾಗುತ್ತಿದೆ. ಉದ್ಯೋಗ ಮೇಳಗಳ ಮೂಲಕವೇ, ಕಳೆದ ಕೆಲವು ತಿಂಗಳಲ್ಲಿ ೧೧ ಲಕ್ಷಕ್ಕೂ ಹೆಚ್ಚು ಯುವಜನರಿಗೆ ನೇಮಕಾತಿ ಪತ್ರಗಳನ್ನು ನೀಡಲಾಗಿದೆ ಎಂದು ತಿಳಿಸಿದರು. ಕಳೆದ ೧೧ ವರ್ಷಗಳಿಂದ ದೇಶವು ವಿಕಸಿತ ಭಾರತ್ ನಿರ್ಮಿಸುವ ಸಂಕಲ್ಪದೊಂದಿಗೆ ಮುಂದುವರಿಯುತ್ತಿದೆ. ಯುವಕರು ಇದರಲ್ಲಿ ಅತ್ಯಂತ ಮಹತ್ವದ ಪಾತ್ರ ವಹಿಸಿದ್ದಾರೆ ಎಂದು ಪ್ರಧಾನಿ ಮೋದಿ ಹೇಳಿದರು. ಸ್ಟೀಲ್ ಇಂಡಿಯಾ

ಮಿಷನ್‌ನಂತಹ ಅಭಿಯಾನಗಳು ಯುವಕರಿಗೆ ಕೌಶಲ್ಯ ತರಬೇತಿಯನ್ನು ನೀಡುತ್ತವೆ. ರಾಷ್ಟ್ರೀಯ ವೃತ್ತಿ ಸೇವಾ ವೇದಿಕೆಯಂತಹ ಉಪಕ್ರಮಗಳು ಅವರನ್ನು ಹೊಸ ಅವಕಾಶಗಳೊಂದಿಗೆ ಸಂಪರ್ಕಿಸುತ್ತಿವೆ ಎಂದರು. ಈ ವೇದಿಕೆಯ ಮೂಲಕವೇ, ೭ ಕೋಟಿಗೂ ಹೆಚ್ಚು ಖಾಲಿ ಹುದ್ದೆಗಳ ಮಾಹಿತಿಯನ್ನು ಈಗಾಗಲೇ ಯುವಕರೊಂದಿಗೆ ಹಂಚಿಕೊಳ್ಳಲಾಗಿದೆ. ಪ್ರತಿಭಾ ಸೇತು ಪೋರ್ಟಲ್ ಯುವಕರಿಗೆ ಮತ್ತೊಂದು ಪ್ರಮುಖ ಹೆಜ್ಜೆಯಾಗಿದೆ ಎಂದು ಅವರು ಹೇಳಿದರು. ಭಾರತದ ಯುವಜನರ ಬಲವನ್ನು ರಾಷ್ಟ್ರದ ಶ್ರೇಷ್ಠ ಶಕ್ತಿಯಾಗಿ ಸರ್ಕಾರ ಪರಿಗಣಿಸುತ್ತದೆ. ದೇಶದ ಯುವಕರನ್ನು ಗಮನದಲ್ಲಿಟ್ಟುಕೊಂಡು ಭಾರತದ ವಿದೇಶಾಂಗ ನೀತಿಯನ್ನು ರೂಪಿಸಲಾಗುತ್ತಿದೆ ಎಂದು ಅವರು ಪ್ರತಿಪಾದಿಸಿದರು. ಭಾರತದ ರಾಜತಾಂತ್ರಿಕ ಮಾತುಕತೆಗಳು ಮತ್ತು ಜಾಗತಿಕ ಒಪ್ಪಂದಗಳು ಯುವಜನರ ತರಬೇತಿ, ಕೌಶಲ್ಯವರ್ಧನೆ ಮತ್ತು ಉದ್ಯೋಗ ಸೃಷ್ಟಿಗೆ ನಿಬಂಧನೆಗಳನ್ನು ಸಹ ಒಳಗೊಂಡಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

*****************

೨೦೪೭ ರ ವೇಳೆಗೆ ವಿಕಸಿತ ಭಾರತದ ದೃಷ್ಟಿಕೋನವನ್ನು ಸಾಧಿಸಲು ಮಹಿಳೆಯರ ಸಕ್ರಿಯ ಭಾಗವಹಿಸುವಿಕೆ ಅಗತ್ಯವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದ್ದಾರೆ. ಕೇರಳದ ಎರ್ನಾಕುಲಂನಲ್ಲಿರುವ ಸಂತ ಥೆರೆಸಾ ಕಾಲೇಜಿನ ಶತಮಾನೋತ್ಸವ ಕಾಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಹಿಳಾ ನಾಯಕಿಯರ ನೇತೃತ್ವದ ಸಮಾಜ, ಹೆಚ್ಚು ಮಾನವೀಯ ಮತ್ತು ಪರಿಣಾಮಕಾರಿಯಾಗಿರುತ್ತದೆ ಎಂದರು. ರಾಷ್ಟ್ರ ನಿರ್ಮಾಣ ಮತ್ತು ಸಾಮಾಜಿಕ ಆರ್ಥಿಕ ಸುಧಾರಣೆಗಳಲ್ಲಿ ಪ್ರಮುಖ ಪಾತ್ರ ವಹಿಸಿದ ಕೇರಳದ ಮಹಿಳೆಯರ ಕೊಡುಗೆಯನ್ನು ರಾಷ್ಟ್ರಪತಿಗಳು ಸ್ಮರಿಸಿದರು. ಕಳೆದ ಹಲವಾರು ದಶಕಗಳಿಂದ ಮಹಿಳೆಯರಿಗೆ ಶಿಕ್ಷಣ ನೀಡುವ ಮತ್ತು ಸಬಲೀಕರಣಗೊಳಿಸುವಲ್ಲಿ ಸಂಸ್ಥೆಯ ಪ್ರಯತ್ನಗಳನ್ನು ಅವರು ಶ್ಲಾಘಿಸಿದರು. ಉದ್ಘಾಟನಾ ಸಮಾರಂಭದಲ್ಲಿ ರಾಷ್ಟ್ರಪತಿಗಳು ಕಾಲೇಜಿನ ಶತಮಾನೋತ್ಸವದ ಲಾಂಛನವನ್ನು ಬಿಡುಗಡೆ ಮಾಡಿದರು.

*****************

ಬಿಹಾರದಲ್ಲಿ, ಎನ್‌ಡಿಎ ಮತ್ತು ಮಹಾಘಟಬಂಧನದ ಸ್ಟಾರ್ ಪ್ರಚಾರಕರು ಇಂದು ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತದ ಅಭ್ಯರ್ಥಿಗಳನ್ನು ಬೆಂಬಲಿಸಿ, ಅನೇಕ ರ‍್ಯಾಲಿಗಳನ್ನು ನಡೆಸಿದರು. ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಸಮಸ್ತಿಪುರದಲ್ಲಿ ಇಂದು ಎನ್‌ಡಿಎ ಅಭ್ಯಥಿಗಳ ಪರವಾಗಿ ಪ್ರಚಾರಕ್ಕೆ ಅಧಿಕೃತವಾಗಿ ಚಾಲನೆ ನೀಡಿದರು. ಈ ವೇಳೆ ಅವರು ಜನ ನಾಯಕ ಕರ್ಪೂರಿ ಠಾಕೂರ್ ಅವರ ಪರಂಪರೆಯನ್ನು ಸ್ಮರಿಸಿದರು. ರಾಜ್ಯಾದ್ಯಂತ ಅಭಿವೃದ್ಧಿ ಮತ್ತು ಸಾಮಾಜಿಕ ನ್ಯಾಯವನ್ನು ವೇಗಗೊಳಿಸುವುದಾಗಿ ಪ್ರತಿಜ್ಞೆ ಮಾಡಿದರು. ದೂಧ್‌ಪೂರ ಹೆಲಿಪ್ಯಾಡ್ ಮೈದಾನದಲ್ಲಿ ಸಾರ್ವಜನಿಕ ರ‍್ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಕರ್ಪೂರಿ ಠಾಕೂರ್ ಅವರನ್ನು ದೇಶದ ಅಮೂಲ್ಯ ರತ್ನ ಎಂದು ಬಣ್ಣಿಸಿದರು. ಇದಕ್ಕೂ ಮುನ್ನ ಮಾಜಿ ಮುಖ್ಯಮಂತ್ರಿ ಕರ್ಪೂರಿ ಠಾಕೂರ್ ಅವರ ಜನ್ಮಸ್ಥಳವಾದ ಕರ್ಪೂರಿ ಗ್ರಾಮದಲ್ಲಿ ಅವರ ಪ್ರತಿಮೆಗೆ ಪ್ರಧಾನಿ ಮೋದಿ ಪುಷ್ಪ ನಮನ ಸಲ್ಲಿಸಿದರು. ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಮತ್ತು ಕೇಂದ್ರ ಸಚಿವ ಜಿತನ್ ರಾಮ್ ಮಾಂಝಿ ಕೂಡ ರ‍್ಯಾಲಿ ಉದ್ದೇಶಿಸಿ ಮಾತನಾಡಿದರು. ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಸಿವಾನ್ ಮತ್ತು ಬಕ್ಸಾರ್ ಜಿಲ್ಲೆಗಳಲ್ಲಿ ಪ್ರಚಾರ ನಡೆಸಿದರು. ಬಿಜೆಪಿ ಹಿರಿಯ ನಾಯಕ ಮತ್ತು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಗೋಪಾಲ್‌ಗಂಜ್‌ನಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಈ ಮಧ್ಯೆ, ಮಹಾಘಟಬಂಧನದ ಮುಖ್ಯಮಂತ್ರಿ ಅಭ್ಯರ್ಥಿ ಮತ್ತು ಆರ್‌ಜೆಡಿ ನಾಯಕ ತೇಜಸ್ವಿ ಪ್ರಸಾದ್ ಯಾದವ್ ಪಾಟ್ನಾದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯದಲ್ಲಿ ಮಹಾಘಟಬಂಧನ ಸರ್ಕಾರ ಅಧಿಕಾರಕ್ಕೆ ಬಂದರೆ, ಗುತ್ತಿಗೆ ನೌಕರರನ್ನು ಖಾಯಂ ಮಾಡಲಾಗುವುದು ಮತ್ತು ರಾಜ್ಯದಲ್ಲಿ ನಿರುದ್ಯೋಗ ಸಮಸ್ಯೆಯನ್ನು ಪರಿಹರಿಸಲು ಕ್ರಮ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.

******************

ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳು ತೆರಿಗೆ ವ್ಯವಸ್ಥೆಯನ್ನು ಹೆಚ್ಚು ಪರಿಣಾಮಕಾರಿ, ಸಮಾನ ಮತ್ತು ಬೆಳವಣಿಗೆ ಆಧಾರಿತವಾಗಿಸುತ್ತದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಉತ್ತರಪ್ರದೇಶದ ಗಾಜಿಯಾಬಾದ್‌ನಲ್ಲಿ ಇಂದು ಹೊಸ ಸಿಜಿಎಸ್‌ಟಿ ಭವನವನ್ನು ಉದ್ಘಾಟಿಸಿದ ಸಚಿವರು, ಪ್ರಾಮಾಣಿಕ ತೆರಿಗೆದಾರರ ಜೀವನವನ್ನು

ಸುಲಭಗೊಳಿಸಲು ಸರ್ಕಾರ ಬದ್ಧವಾಗಿದೆ. ಪರಿಣಾಮಕಾರಿ ತೆರಿಗೆ ವ್ಯವಸ್ಥೆಯು ಆರ್ಥಿಕ ಬೆಳವಣಿಗೆಯನ್ನು ಹೆಚ್ಚಿಸುತ್ತದೆ ಎಂದರು. ಜಿಎಸ್‌ಟಿ ನೋಂದಣಿ ಪ್ರಕ್ರಿಯೆಯನ್ನು ಸರಳಗೊಳಿಸುವ ಕ್ರಮಗಳನ್ನು ಜಿಎಸ್‌ಟಿ ಮಂಡಳಿ ಅನುಮೋದಿಸಿದೆ. ಇದು ಸುಲಭ, ಸುಗಮ ಮತ್ತು ಹೆಚ್ಚು ಪಾರದರ್ಶಕವಾಗಿಸುತ್ತದೆ. ಮುಂದಿನ ತಿಂಗಳು ೧ ರಿಂದ ಸರಳೀಕೃತ ಜಿಎಸ್‌ಟಿ ನೋಂದಣಿ ಯೋಜನೆ ಜಾರಿಗೆ ಬರಲಿದೆ ಎಂದು ಸಚಿವರು ತಿಳಿಸಿದರು.

ಧ್ವನಿ : ನಿರ್ಮಲಾ ಸೀತಾರಾಮನ್ (24 ಸೆಕೆಂಡುಗಳು)

******************

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಇಂದು ಜರ್ಮನಿಯ ಬರ್ಲಿನ್‌ನಲ್ಲಿ ನಡೆದ ಬರ್ಲಿನ್ ಜಾಗತಿಕ ಸಂವಾದದ ಮೂರನೇ ಆವೃತ್ತಿಯಲ್ಲಿ ಭಾಗವಹಿಸಿದ್ದರು. ಸಾಮಾಜಿಕ ಮಾಧ್ಯಮದಲ್ಲಿ ಪಿಯೂಷ್ ಗೋಯಲ್, ಭಾರತ, ತನ್ನ ವ್ಯಾಪಾರ ಪಾಲುದಾರಿಕೆಯನ್ನು ದೀರ್ಘಾವಧಿಯ ಮತ್ತು ಪರಸ್ಪರ ಬೆಳವಣಿಗೆಯ ದೃಷ್ಟಿಕೋನದ ಮೂಲಕ ನೋಡುತ್ತದೆ. ಭಾರತದಲ್ಲಿ ಹೂಡಿಕೆಗೆ ಜಾಗತಿಕ ಕಂಪನಿಗಳಿಗೆ ವಿಶಾಲ ಅವಕಾಶಗಳಿವೆ ಎಂದು ಹೇಳಿದರು. ಬರ್ಲಿನ್‌ನಲ್ಲಿ ನಡೆದ ವ್ಯಾಪಾರ ನಾಯಕರ ದುಂಡುಮೇಜಿನ ಸಭೆಯಲ್ಲಿ ಜರ್ಮನ್ ಉದ್ಯಮಿಗಳನ್ನು ಸಚಿವರು ಭೇಟಿಯಾದರು. ನಾವೀನ್ಯತೆ ಮತ್ತು ಉದ್ಯಮಶೀಲತೆಯನ್ನು ಬೆಳೆಸುವ ಬೆಂಬಲಿತ ನೀತಿ ಮತ್ತು ವ್ಯವಸ್ಥೆಯು ಭಾರತವನ್ನು ಜಾಗತಿಕವಾಗಿ ಅತ್ಯಂತ ಆಕರ್ಷಕ ಹೂಡಿಕೆ ತಾಣಗಳಲ್ಲಿ ಒಂದನ್ನಾಗಿ ಮಾಡುತ್ತಿದೆ ಎಂದು ಸಚಿವ ಪಿಯೂಷ್ ಗೋಯಲ್ ಪುನರುಚ್ಚರಿಸಿದರು.

******************

ರಾಜಸ್ಥಾನದ ಜೈಸಲ್ಮೇರ್‌ನಲ್ಲಿ ಇಂದು ನಡೆದ ಸೇನಾ ಕಮಾಂಡರ್‌ಗಳ ಸಮ್ಮೇಳನದ ಅಧ್ಯಕ್ಷತೆಯನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ವಹಿಸಿದ್ದರು. ಸೇನಾ ಕಮಾಂಡರ್‌ಗಳ ಸಮ್ಮೇಳನವು, ಸೇನೆಯ ಹಿರಿಯ ನಾಯಕತ್ವಕ್ಕೆ ಭದ್ರತಾ ಪರಿಸ್ಥಿತಿಯನ್ನು ನಿರ್ಣಯಿಸಲು, ಕಾರ್ಯಾಚರಣೆಯ ಆದ್ಯತೆಗಳ ಕುರಿತು ಚರ್ಚಿಸಲು ಮತ್ತು ಪ್ರಮುಖ ನೀತಿ ನಿರ್ಧಾರಗಳನ್ನು ತೆಗೆದುಕೊಳ್ಳಲು ಉನ್ನತ ಮಟ್ಟದ ಸಾಂಸ್ಥಿಕ ವೇದಿಕೆಯಾಗಿದೆ. ರಕ್ಷಣಾ ಸಿಬ್ಬಂದಿ ಮುಖ್ಯಸ್ಥ

ಜನರಲ್ ಅನಿಲ್ ಚೌಹಾಣ್ ಅವರೊಂದಿಗೆ, ಸಚಿವ ರಾಜನಾಥ್ ಸಿಂಗ್ ಪ್ರಸ್ತುತ ಭದ್ರತಾ ಸನ್ನಿವೇಶವನ್ನು ಪರಿಶೀಲಿಸಿದರು ಮತ್ತು ಭಾರತೀಯ ಸೇನೆಯ ಕಾರ್ಯಾಚರಣೆಯ ಸಾಮರ್ಥ್ಯಗಳನ್ನು ಹೆಚ್ಚಿಸಲು ತಂತ್ರಗಳನ್ನು ಅನ್ವೇಷಿಸಿದರು. ಸಮ್ಮೇಳನಕ್ಕೂ ಮುನ್ನ ಸಚಿವ ರಾಜನಾಥ್ ಸಿಂಗ್ ತನೋಟ್ ಮಾತಾ ದೇವಾಲಯಕ್ಕೆ ಭೇಟಿ ನೀಡಿ, ಪ್ರಾರ್ಥನೆ ಸಲ್ಲಿಸಿದರು ಮತ್ತು ಸಾಂಪ್ರದಾಯಿಕ ಆಚರಣೆಗಳಲ್ಲಿ ಭಾಗವಹಿಸಿದರು.

*****************

ಪ್ರಧಾನಿ ನರೇಂದ್ರ ಮೋದಿ ಅವರು ಇದೇ ಭಾನುವಾರ ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೇಡಿಯೋ ಕಾರ್ಯಕ್ರಮದ ೧೧೭ನೇ ಆವೃತ್ತಿಯಾಗಿದೆ. ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ. ಅಲ್ಲದೆ ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲೂ ಆಕಾಶವಾಣಿ ಈ ಕಾರ್ಯಕ್ರಮವನ್ನು ಪ್ರಸಾರ ಮಾಡಲಿದೆ.

*****************

ವಿಶ್ವ ಪೋಲಿಯೊ ದಿನದ ಅಂಗವಾಗಿ, ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ, ಅಚಲವಾದ ರಾಷ್ಟ್ರೀಯ ಪ್ರಯತ್ನಗಳು ಮತ್ತು ಬಲವಾದ ಸಾರ್ವಜನಿಕ ಭಾಗವಹಿಸುವಿಕೆಯ ಮೂಲಕ ಪೋಲಿಯೊ ನಿರ್ಮೂಲನೆಯಲ್ಲಿ ಭಾರತದ ಗಮನಾರ್ಹ ಪ್ರಯಾಣವನ್ನು ಒತ್ತಿ ಹೇಳಿದರು. ಸಾಮಾಜಿಕ ಮಾಧ್ಯಮದಲ್ಲಿ ಅವರು, ಪ್ರತಿ ಮನೆಗೂ ಆರೋಗ್ಯ ಕಾರ್ಯಕರ್ತರು ಭೇಟಿ ನೀಡಿ, ಪೋಲಿಯೊ ರೋಗದ ವಿರುದ್ಧದ ಹೋರಾಟದಲ್ಲಿ ಯಾವುದೇ ಮಗು ಹಿಂದೆ ಉಳಿಯದಂತೆ ನೋಡಿಕೊಳ್ಳುವುದರಿಂದ, ಪೋಲಿಯೊ ನಿರ್ಮೂಲನೆಯಲ್ಲಿ ಯಶಸ್ಸು ಸಾಧ್ಯವಾಯಿತು ಎಂದು ಹೇಳಿದರು. ಸಕಾಲಿಕ ಲಸಿಕೆ ಹಾಕುವ ಮೂಲಕ ಪ್ರತಿ ಮಗುವನ್ನು

ರಕ್ಷಿಸುವ ಬದ್ಧತೆಯೊಂದಿಗೆ, ಆರೋಗ್ಯಕರ, ಪೋಲಿಯೊ ಮುಕ್ತ ಭವಿಷ್ಯಕ್ಕಾಗಿ ಒಟ್ಟಾಗಿ ಕೆಲಸ ಮಾಡುವಂತೆ ಅವರು ಜನರನ್ನು ಒತ್ತಾಯಿಸಿದರು.

*****************

ಈ ವರ್ಷದ ರಾಷ್ಟ್ರೀಯ ಏಕತಾ ದಿನ ಆಚರಣೆಯು ಎಲ್ಲರನ್ನೂ ಒಳಗೊಳ್ಳುವಂತಿರಲಿದ್ದು, ದೇಶಾದ್ಯಂತದ ಭದ್ರತಾ ಸಿಬ್ಬಂದಿ ಭಾಗವಹಿಸಲಿದ್ದಾರೆ ಎಂದು ಗಡಿ ಭದ್ರತಾ ಪಡೆ-ಬಿಎಸ್ಎಫ್ ಮಹಾನಿರ್ದೇಶಕ ದಲ್ಜಿತ್ ಸಿಂಗ್ ಚೌಧರಿ ಹೇಳಿದ್ದಾರೆ. ರಾಷ್ಟ್ರೀಯ ಏಕತಾ ದಿವಸ್-೨೦೨೫ ಆಚರಣೆಯ ಕುರಿತು ನವದೆಹಲಿಯಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ವೈವಿಧ್ಯತೆಯಲ್ಲಿ ಏಕತೆ, ಸಾಮರಸ್ಯ ಮತ್ತು ರಾಷ್ಟ್ರ ನಿರ್ಮಾಣದ ಮನೋಭಾವ, ಈ ವರ್ಷದ ಆಚರಣೆಯ ಧ್ಯೇಯವಾಗಿದೆ ಎಂದರು.

*****************